# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 745 (1016) |
| ಸದಸ್ಯರ ಹೆಸರು | : ಶ್ರೀ ಎಸ್ ಎಲ್ ಭೋಜೇಗೌಡ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 15.12.2025 |
| ಉತ್ತರಿಸುವ ಸಚಿವರು | : ಉನ್ನತ ಶಿಕ್ಷಣ ಸಚಿವರು |

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸರ್ಕಾರಿ ಇಲಾಖೆಗಳಲ್ಲಿ ಡಿ ವೃಂದದ ಮತ್ತು ವಾಹನ ಚಾಲಕರ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾತ್ರ ಭರ್ತಿ ಮಾಡಲು ಸರ್ಕಾರವು ಆದೇಶಿಸಿದ್ದು, ರಾಜ್ಯದ ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ 'ಸಿ' ಮತ್ತು 'ಡಿ' ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸದೆ ಇರುವುದು ಯಾವ ಉದ್ದೇಶಕ್ಕಾಗಿ: (ಪೂರ್ಣ ಮಾಹಿತಿ ನೀಡುವುದು)</td><td rowspan="2">ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅನುದಾನಿತ ಇಂಜಿನಿಯರಿಂಗ್ ಮತ್ತು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದಗಳಲ್ಲಿ ತೆರವಾಗಿರುವ ಬೋಧಕೇತರ ಹುದ್ದೆಗಳ ವಿವರ ಕೆಳಕಂಡಂತಿದೆ:<br><br>ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು
<table>
<tr><th>ವೃಂದ</th><th>ಮಂಜೂರಾದ ಹುದ್ದೆಗಳು</th><th>ಭರ್ತಿಯಾದ ಹುದ್ದೆಗಳು</th><th>ಖಾಲಿ ಹುದ್ದೆಗಳು</th></tr>
<tr><td>ಸಿ</td><td>689</td><td>223</td><td>466</td></tr>
<tr><td>ಡಿ</td><td>511</td><td>192</td><td>319</td></tr>
</table>
ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳು
<table>
<tr><th>ವೃಂದ</th><th>ಮಂಜೂರಾದ ಹುದ್ದೆಗಳು</th><th>ಭರ್ತಿಯಾದ ಹುದ್ದೆಗಳು</th><th>ಖಾಲಿ ಹುದ್ದೆಗಳು</th></tr>
<tr><td>ಸಿ</td><td>1376</td><td>735</td><td>641</td></tr>
<tr><td>ಡಿ</td><td>971</td><td>578</td><td>393</td></tr>
</table>
ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 551 ಯುಪಿಸಿ 99, ದಿನಾಂಕ: 07.08.2003 ರಲ್ಲಿ ಪ್ರಕಟಿಸಲಾದ Karnataka Educational Institutions (Collegiate Education) Rules, 2003 ನ ನಿಯಮ 8(2) ರನ್ವಯ ದಿನಾಂಕ:01.03.2001 ನಂತರ ನಿವೃತ್ತಿ, ನಿಧನ, ರಾಜೀನಾಮೆ ಅಥವಾ ಇತರ ಕಾರಣಗಳಿಂದ ಖಾಲಿಯಾದ ಬೋಧಕೇತರ ಹುದ್ದೆಗಳು ಶಾಶ್ವತವಾಗಿ ಅನುದಾನರಹಿತ ಹುದ್ದೆಗಳೆಂದು ಪರಿಗಣಿಸಲಾಗಿದೆ. ಹೀಗಾಗಿ ಅಂತಹ ಹುದ್ದೆಗಳನ್ನು ಸರ್ಕಾರದಿಂದ ಭರ್ತಿ ಮಾಡಲು ಅವಕಾಶ ಇರುವುದಿಲ್ಲ.<br><br>ಆದರೆ ಅಂತಹ 'ಸಿ' ಮತ್ತು 'ಡಿ' ವೃಂದದ ಹುದ್ದೆಗಳನ್ನು ಸಂಸ್ಥೆಯ ಆಡಳಿತ ಮಂಡಳಿಯೇ ಭರ್ತಿ ಮಾಡಿಕೊಳ್ಳಬಹುದಾಗಿರುತ್ತದೆ.</td></tr>
<tr><td>ಆ)</td><td>ರಾಜ್ಯದ ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರದಿಂದ ಮಂಜೂರಾಗಿರುವ ಸಾವಿರಾರ ಸಂಖ್ಯೆಯ ಬೋಧಕೇತರ ವೃಂದದ ಹುದ್ದೆಗಳು/ಆಡಳಿತಾತ್ಮಕ ಹುದ್ದೆಗಳು (ಪ್ರ.ದ.ಸ./ ದ್ವಿ.ದ.ಸ.) ಖಾಲಿಯಿದ್ದು; ಈ ಹುದ್ದೆಗಳನ್ನು ಪೂರ್ಣಾವಧಿಗೆ ನೇರ ನೇಮಕಾತಿಯ ಮೂಲಕ ಭರ್ತಿ ಮಾಡಲು ಸಹ ಅನುಮತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು;</td></tr>
</table>

<table>
<tr><td>ಇ)</td><td>ಪೂರ್ಣಕಾಲಿಕ ಅಥವಾ ಹೊರಗುತ್ತಿಗೆ ಆಧಾರದ ಮೇಲೆ ಬೋಧಕೇತರ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ನೀಡದಿರುವುದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ತರಗತಿಗಳನ್ನು ನಡೆಸಲು ಮತ್ತು ಕಛೇರಿ ಕೆಲಸಗಳನ್ನು ನಿರ್ವಹಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;</td><td rowspan="2">ಮೇಲಿನ ನಿಯಮದನ್ವಯ ದಿನಾಂಕ: 01.03.2001 ರ ನಂತರ ನಿವೃತ್ತಿ, ನಿಧನ, ರಾಜೀನಾಮೆ ಅಥವಾ ಇತರ ಕಾರಣಗಳಿಂದ ಖಾಲಿಯಾದ ಶಾಶ್ವತ ಅನುದಾನರಹಿತ ಹುದ್ದೆಗಳನ್ನು ಸಂಸ್ಥೆಯ ಆಡಳಿತ ಮಂಡಳಿಯೇ ಭರ್ತಿ ಮಾಡಬೇಕಾಗಿರುತ್ತದೆ ಮತ್ತು ಆ ಹುದ್ದೆಗಳಿಗೆ ಸಂಬಂಧಿಸಿದ ವೇತನ ಹಾಗೂ ಇತರ ಭತ್ಯೆಗಳನ್ನು ಸಂಸ್ಥೆಯೇ ತನ್ನ ಸ್ವಂತ ಸಂಪನ್ಮೂಲಗಳಿಂದ ಪಾವತಿಸಬೇಕಾಗಿರುತ್ತದೆ.</td></tr>
<tr><td>ಈ)</td><td>ಬಹುಪಾಲು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳು ಹಿಂದುಳಿದ /ಗ್ರಾಮೀಣ ಪ್ರದೇಶದಲ್ಲಿದ್ದು, ಸಾವಿರಾರು ಬೋಧಕೇತರ ಹುದ್ದೆಗಳು ಖಾಲಿಯಿರುವ ಕಾರಣ ಈ ಭಾಗದ ವಿದ್ಯಾರ್ಥಿಗಳು ಗುಣಮಟ್ಟದ ತಾಂತ್ರಿಕ ಶಿಕ್ಷಣದಿಂದ ವಂಚಿತರಾಗುವುದಿಲ್ಲವೆ: ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ?</td></tr>
</table>

**ಸಂಖ್ಯೆ:ಇಡಿ 132 ಟಿಪಿಇ 2025**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು